ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

32

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ

ದಿನಾಂಕ : DATE : 11-12-2020

# ಕಾಡುಪ್ರಾಣಿಗಳಿಂದಾದ ಬೆಳೆ ನಷ್ಟಕ್ಕೆ ಪರಿಹಾರ ನೀಡಿ: ಶಾಸಕರು

## ದನಿಗೂಡಿಸಿದ ಸ್ಪೀಕರ್ | ಸರ್ಕಾರದಿಂದ ಪರಿಶೀಲನೆ ಭರವಸೆ

• **ಕನ್ನಡಪ್ರಭ ವಾರ್ತೆ** ವಿಧಾನಸಭೆ

ಆನೆ ಸೇರಿದಂತೆ ಕಾಡುಪ್ರಾಣಿಗಳ ಹಾವಳಿ ತಡೆ ಹಾಗೂ ಅವುಗಳಿಂದಾಗುವ ಬೆಳೆ ಹಾನಿಗೆ ರೈತರಿಗೆ ಸೂಕ್ತ ಪರಿಹಾರ ಕಲ್ಪಿಸಬೇಕೆಂದು ಪ್ರಶ್ನೋತ್ತರ ಅವಧಿಯಲ್ಲಿ ಸ್ಪೀಕರ್ ಹಾಗೂ ಆಡಳಿತ ಪಕ್ಷದ ಹಲವು ಸದಸ್ಯರು ಒಕ್ಕೊರಲಿಂದ ಸರ್ಕಾರವನ್ನು ಒತ್ತಾಯಿಸಿದರು.

ಬಿಜೆಪಿ ಸದಸ್ಯ ಎಂ.ಪಿ.ಕುಮಾರಸ್ವಾಮಿ, ಮೂಡಿಗೆರೆ ತಾಲೂಕಿನಲ್ಲಿ 500 ಎಕರೆಗೂ ಹೆಚ್ಚಿನ ಭತ್ತದ ಗದ್ದೆ ಹಾಗೂ ಕೃಷಿ ಬೆಳೆಗಳನ್ನು ಆನೆಗಳ ಹಿಂಡು ಹಾಳು ಮಾಡಿದ್ದು ಅಲ್ಲಿನ ರೈತರಿಗೆ ಸೂಕ್ತ ಪರಿಹಾರ ನೀಡಿ ಆನೆಗಳನ್ನು ಸ್ಥಳಾಂತರಿಸಿ ಎಂದು ಒತ್ತಾಯಿಸಿದರು. ಆನೆ ದಾಳಿ ತಡೆಗೆ ಸರ್ಕಾರ ವಿಫಲವಾಗಿದೆ ಎಂದರು.

ಇದಕ್ಕೆ ದನಿಗೂಡಿಸಿ ಮಾತನಾಡಿದ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಹಾಗೂ ಬಿಜೆಪಿ ಸದಸ್ಯ ಆರಗ ಜ್ಞಾನೇಂದ್ರ ಮತ್ತಿತರ ಸದಸ್ಯರು, ತಮ್ಮ ಭಾಗಗಳಲ್ಲೂ ಆನೆ ಸೇರಿದಂತೆ ಕಾಡು ಪ್ರಾಣಿಗಳ ಹಾವಳಿ ಹೆಚ್ಚಾಗಿದೆ. ರೈತರ ಸ್ಥಿತಿ ಕೈಗೆ ಬಂದ ತುತ್ತು ಬಾಯಿಗೆ ಬರುತ್ತಿಲ್ಲ ಎನ್ನುವಂತಾಗಿದೆ. ಹಾಗಾಗಿ ಸರ್ಕಾರ ಪರಿಹಾರ ನೀಡಬೇಕು. ಅರ್ಜಿಗಳನ್ನು ತ್ವರಿತ ವಿಲೇವಾರಿ ಮಾಡಬೇಕು. ಇಲ್ಲವೇ ಸೂಕ್ತ ಪರಿಹಾರ ನೀಡಿ ಅಲ್ಲಿನ ಜನರನ್ನೇ ಸ್ಥಳಾಂತರಿಸಬೇಕೆಂದು ಒತ್ತಾಯಿಸಿದರು.

ಅರಣ್ಯ ಸಚಿವರು ಸದನದಲ್ಲಿ ಉಪಸ್ಥಿತರಿಲ್ಲದ ಕಾರಣ ಸರ್ಕಾರದ ಪರವಾಗಿ ನಗರಾಭಿವೃದ್ಧಿ ಸಚಿವ ಭೈರತಿ ಬಸವರಾಜು ಉತ್ತರ ನೀಡಿ, ಆನೆಗಳ ದಾಳಿ ತಡೆಗೆ ಮೂಡಿಗೆರೆ ವ್ಯಾಪ್ತಿಯಲ್ಲಿ ಹಲವು ಕಾಮಗಾರಿ ಕೈಗೊಳ್ಳಲಾಗಿದೆ. ದಾಳಿ ತಡೆ ಹಾಗೂ ಪರಿಹಾರ ಹೆಚ್ಚಿಸುವ ಬಗ್ಗೆ ಅರಣ್ಯ ಸಚಿವರ ಗಮನಕ್ಕೆ ತಂದು ಕ್ರಮ ವಹಿಸುವುದಾಗಿ ತಿಳಿಸಿದರು.

# ಸಂಸದೀಯ ಕಾರ್ಯದರ್ಶಿ ಹುದ್ದೆ ರದ್ದು: ಮೇಲ್ಮನೆ ಒಕೆ

**ವಿಧಾನ ಪರಿಷತ್:** ಸಂಸದೀಯ ಕಾರ್ಯದರ್ಶಿ ಹುದ್ದೆಗಳನ್ನು ರದ್ದುಗೊಳಿಸುವ ವಿಧೇಯಕವನ್ನು ವಿಧಾನ ಪರಿಷತ್ ಚರ್ಚೆಯಿಲ್ಲದೆ ಧ್ವನಿ ಮತದ ಮೂಲಕ ಅಂಗೀಕರಿಸಿತು. ವಿಧಾನಸಭೆಯಲ್ಲಿ ಅಂಗೀಕಾರವಾಗಿದ್ದ 'ಕರ್ನಾಟಕ ಸಂಸದೀಯ ಕಾರ್ಯದರ್ಶಿಗಳ ವೇತನ, ಭತ್ಯೆಗಳು ಮತ್ತು ಸಂಕೀರ್ಣ ಉಪಬಂಧಗಳ (ನಿರಸನಗೊಳಿಸುವ) ವಿಧೇಯಕ -2020' ಅನ್ನು ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ ಅವರು ಪರಿಷತ್‌ನಲ್ಲಿ ಮಂಡಿಸಿದರು. ಸುಪ್ರೀಂ ಕೋರ್ಟ್ ಸಂಸದೀಯ ಕಾರ್ಯದರ್ಶಿಗಳ ಹುದ್ದೆಯನ್ನು ಅನೂರ್ಜಿತಗೊಳಿಸಿ ತೀರ್ಪು ನೀಡಿರುವ ಹಿನ್ನೆಲೆಯಲ್ಲಿ ಈ ವಿಧೇಯಕವನ್ನು ರೂಪಿಸಲಾಗಿದೆ ಎಂದು ಅವರು ಪರಿಷತ್‌ಗೆ ತಿಳಿಸಿದರು.

# ವಿಪಕ್ಷ ಸದಸ್ಯರಿಲ್ಲದೆಯೇ ಕಲಾಪ!

## ಕಾಂಗ್ರೆಸ್‌ನ ಒಬ್ಬರೂ ಶಾಸಕರಿಲ್ಲದೆ ಇಡೀ ದಿನ ನಡೆದ ಸದನ

• **ಕನ್ನಡಪ್ರಭ ವಾರ್ತೆ** ವಿಧಾನಸಭೆ

ಪ್ರತಿಪಕ್ಷ ಕಾಂಗ್ರೆಸ್ ಬಹಿಷ್ಕಾರದ ನಡುವೆಯೇ ವಿಧಾನಸಭೆ ಕಾರ್ಯ ಕಲಾಪ ಗುರುವಾರವಿಡೀ ನಡೆದಿದ್ದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಿಧೇಯಕ 2020 ಸೇರಿ ಕೆಲ ವಿಧೇಯಕಗಳ ಅಂಗೀಕಾರವಾಯಿತು.



ತಮ್ಮ ಸಲಹೆ, ಅಭಿಪ್ರಾಯಗಳಿಗೆ ಸರ್ಕಾರ ಮನ್ನಣೆ ನೀಡುತ್ತಿಲ್ಲ ಎಂದು ಆರೋಪಿಸಿ ಸದನ ಬಹಿಷ್ಕರಿಸುವುದಾಗಿ ಬುಧವಾರವೇ ಘೋಷಿಸಿದ್ದ ಪ್ರತಿಪಕ್ಷ ಕಾಂಗ್ರೆಸ್‌ನ ಯಾವೊಬ್ಬ ಸದಸ್ಯರೂ ಗುರುವಾರ ಸದನಕ್ಕೆ ಹಾಜರಾಗಲಿಲ್ಲ. ಇದನ್ನು ಗಮನಿಸಿದ ಸ್ಪೀಕರ್, ಸದನದ ಕಲಾಪ ಬಹಿಷ್ಕರಿಸುವುದು ಸರಿಯಲ್ಲ. ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಸೈದ್ಧಾಂತಿಕ ವಿರೋಧ ಇದ್ದೇ ಇರುತ್ತದೆ. ಅದನ್ನು ಜನರ ಮುಂದೆ ಕೊಂಡೊಯ್ಯುವ ಪ್ರಯತ್ನ ಮಾಡಲಿ. ಪ್ರತಿಪಕ್ಷದ ಸದಸ್ಯರು ಕಲಾಪದಲ್ಲಿ ಪಾಲ್ಗೊಳ್ಳಬೇಕೆಂದು ಮನವಿ ಮಾಡಿದರು.

ಜತೆಗೆ, ಪ್ರತಿಪಕ್ಷದವರ ಮನವೊಲಿಸುವ ಪ್ರಯತ್ನ ನಡೆಸಲು ಮುಂದಾಗಿ, ಸದನವನ್ನು ಹತ್ತು ನಿಮಿಷ ಸದನ ಮುಂದೂಡಿದರು. ನಂತರ ಕಾಂಗ್ರೆಸ್ ಸದಸ್ಯರನ್ನು ಸ್ಪೀಕರ್ ತಮ್ಮ ಕಚೇರಿಗೆ ಆಹ್ವಾನಿಸಿದರು. ಆದರೆ, ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಸದಸ್ಯರು ಬರದ ಕಾರಣ 10 ನಿಮಿಷ ಬಳಿಕ ಮತ್ತೆ ಸದನ ಆರಂಭಿಸಿದರು. ಸದ್ಯ ಶಾಸಕಾಂಗ ಪಕ್ಷದ ಸಭೆ ಇರುವುದರಿಂದ ಕಾಂಗ್ರೆಸ್ ಸದಸ್ಯರು ಬರದ ಕಾರಣ ಸದನವನ್ನು ಮುಂದುವರೆಸೋಣ. ಅವರು ಸದನಕ್ಕೆ ಬರುವ ಸಂಪೂರ್ಣ ವಿಶ್ವಾಸವಿದೆ ಎಂದು ಸ್ಪೀಕರ್ ಹೇಳಿದರು.

ಇದಕ್ಕೂ ಮುನ್ನ ಸದನದಲ್ಲಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ. ಮಾಧುಸ್ವಾಮಿ ಮಾತನಾಡಿ, ವಿಧಾನಸಭೆಯಲ್ಲಿ ಅಂಗೀಕಾರಗೊಂಡ ಎಷ್ಟೋ ವಿಧೇಯಕಗಳು ಮೇಲ್ಮನೆಯಲ್ಲಿ ಅಂಗೀಕಾರವಾಗದೆ ಬಾಕಿ ಉಳಿಯುತ್ತಿವೆ. ರಾಜ್ಯಪಾಲರು ಇದನ್ನು ಗಮನಿಸಿ ಪ್ರಶ್ನಿಸಿದ್ದಾರೆ. ಎರಡೂ ಸದನಗಳಲ್ಲಿ ಬಿಲ್ ಪಾಸಾಗದ ಸ್ಥಿತಿ ಏಕೆ ಎಂದು ಪ್ರಶ್ನಿಸಿದ್ದಾರೆ. ಬಿಎಸಿ (ಕಲಾಪ ಸಲಹಾ ಸಮಿತಿ) ಸಭೆಯಲ್ಲೂ ಮಹತ್ವದ ಬಿಲ್ ಮಂಡಿಸುವುದಾಗಿ ಹೇಳಿದ್ದರೂ ಕಾಂಗ್ರೆಸ್ ಸದಸ್ಯರು ಸದನಕ್ಕೆ ಬಾರದಿರುವುದು ಸರಿಯಲ್ಲ ಎಂದರು.